# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ಚೌಕ, ಬೆಂಗಳೂರು-560 002**

**ಪತ್ರಿಕಾ ಪ್ರಕಟಣೆ** **ದಿನಾಂಕ:25.01.2021**

## 11ನೇ ರಾಷ್ಟ್ರೀಯ ಮತದಾರರ ದಿನಾಚರಣೆ-2021:

ಭಾರತ ಚುನಾವಣಾ ಆಯೋಗ-ಮುಖ್ಯ ಚುನಾವಣಾಧಿಕಾರಿ, ಕರ್ನಾಟಕ ವತಿಯಿಂದ ನಗರದ ಸರ್ ಪುಟ್ಟಣ್ಣ ಚೆಟ್ಟಿ ಪುರಭವನ(ಟೌನ್ ಹಾಲ್)ದಲ್ಲಿ ಇಂದು ನಡೆದ "**ರಾಷ್ಟ್ರೀಯ ಮತದಾರರ ದಿನಾಚರಣೆ-2021**" ಕಾರ್ಯಕ್ರಮವನ್ನು ಮಾನ್ಯ ಶ್ರೀ ಪಿ.ರವಿಕುಮಾರ್, ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ಮಾನ್ಯ ಡಾ. ಸಂಜೀವ್ ಕುಮಾರ್, ಮುಖ್ಯ ಚುನಾವಣಾಧಿಕಾರಿ, ಕರ್ನಾಟಕ ಮತ್ತು ಮಾನ್ಯ ಶ್ರೀ ಎನ್.ಮಂಜುನಾಥ್ ಪ್ರಸಾದ್, ಆಯುಕ್ತರು, ಬಿಬಿಎಂಪಿ ರವರು ಉದ್ಘಾಟಿಸಿದರು. ಈ ವೇಳೆ ಹಿರಿಯ ಐಎಎಸ್ ನಿವೃತ್ತ ಅಧಿಕಾರಿ ಶ್ರೀ ವಸ್ತ್ರದ್, ವಿಶೇಷ ಆಯುಕ್ತರು(ಆಡಳಿತ) ಜೆ.ಮಂಜುನಾಥ್ ಹಾಗೂ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಭಾರತದಲ್ಲಿ ಚುನಾವಣೆಯ ಬಗ್ಗೆ ಜನರು ಗಂಭೀರವಾಗಿ ಪರಿಗಣಿಸುತ್ತಿಲ್ಲ. ಚುನಾವಣೆ ಪ್ರಕ್ರಿಯೆಯು ಬಹಳ ಕಠಿಣವಾಗಿದ್ದು, ಅಧಿಕಾರಿಗಳು ಎಷ್ಟು ಶ್ರಮವಹಿಸಿ ಕೆಲಸ ಮಾಡುತ್ತಾರೆ ಎಂಬುದರ ಬಗ್ಗೆ ಜನರಿಗೆ ತಿಳಿದಿಲ್ಲ ಎಂದು ಮುಖ್ಯ ಕಾರ್ಯದರ್ಶಿ ಪಿ.ರವಿಕುಮಾರ್ ರವರು ತಿಳಿಸಿದರು.

ರಾಷ್ಟ್ರೀಯ ಮತದಾರರ ದಿನಾಚರಣೆಯನ್ನು ಉದ್ಘಾಟಿಸಿದ ಬಳಿಕ ಮುಖ್ಯ ಕಾರ್ಯದರ್ಶಿಗಳು ಮಾತನಾಡಿ, ಚುನಾವಣಾ ಪ್ರಕ್ರಿಯೆಯಲ್ಲಿ ತೊಡಗಿರುವ ಅಧಿಕಾರಿಗಳು ಮತದಾರರ ನೋಂದಣಿ ಮಾಡುವುದು, ಮತದಾರರ ಪಟ್ಟಿ ಸಿದ್ಧಪಡಿಸುವುದು/ಪರಿಷ್ಕರಿಸುವುದು, ಚುನಾವಣೆ ನಡೆಸುವುದು, ಮತ ಎಣಿಕೆ, ಹೊಸ ಮತದಾರರನ್ನು ಸೇರ್ಪಡೆ ಮಾಡುವುದು, ಮತದಾನದ ಬಗ್ಗೆ ಜನರಲ್ಲಿ ಅರಿವು ಮೂಡಿಸುವುದು ಸೇರಿದಂತೆ ವರ್ಷವಿಡೀ ವಿವಿಧ ಕಾರ್ಯಗಳಲ್ಲಿ ತೊಡಗಿರುತ್ತಾರೆ. 18ವರ್ಷ ತುಂಬಿದವರಿಗೆ ಮತದಾನ ಮಾಡುವ ಹಕ್ಕು ಸಿಗಲಿದ್ದು, ಎಲ್ಲರೂ ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾಗಿ ಮತದಾನ ಚಲಾಯಿಸಬೇಕು. ಮತದಾನ ಪ್ರಕ್ರಿಯೆಯಲ್ಲಿ ಯುವಕರ ಪಾತ್ರ ಬಹಳ ಪ್ರಾಮುಖ್ಯವಾಗಿದ್ದು, ಈ ಬಗ್ಗೆ ಯುವ ಪೀಳಿಗೆಯಲ್ಲಿ ಹೆಚ್ಚು ಹೆಚ್ಚು ಅರಿವು ಮೂಡಿಸುವ ಕೆಲಸ ಮಾಡಬೇಕು. ಮತದಾರರ ಪಟ್ಟಿಯಲ್ಲಿ ಎಲ್ಲರೂ ಸೇರ್ಪಡೆಯಾಗಬೇಕು. ಮತದಾರರ ಪಟ್ಟಿಗೆ ಬಹಳ ಸುಲಭವಾಗಿ ಸೇರ್ಪಡೆಯಾಗಬಹುದು. ಚುನಾವಣಾ ಆಯೋಗದ ವೆಬ್‌ಸೈಟ್ ಮೂಲಕ ಮನೆಯಲ್ಲೇ ಕುಳಿತು ಮತದಾರರ ಗುರುತಿನ ಚೀಟಿ ಪಡೆಯಬಹುದಾಗಿದೆ ಎಂದು ಹೇಳಿದರು.

ರಾಜ್ಯದಲ್ಲಿ ಮತದಾನ ನಡೆಯುವ ವೇಳೆ ಕಳೆದ 20 ವರ್ಷಗಳಿಂದ ಇವಿಎಂಗಳನ್ನು ಬಳಕೆ ಮಾಡಲಾಗುತ್ತಿದೆ. ಆದರೆ, ಜನರಲ್ಲಿ ಇವಿಎಂಗಳ ಬಗ್ಗೆ ಕೆಲ ಊಹಾಪೋಗಳಿವೆ. ಇವಿಎಂಗಳ ಬಗ್ಗೆ ಇರುವ ಊಹಾಪೋಹಗಳು ಸರಿಯಲ್ಲ. ಅದರಲ್ಲಿರುವ ಮಾಹಿತಿಯನ್ನು ತಿರುಚಲು ಆಗುವುದಿಲ್ಲ. ಭಾರತದಲ್ಲಿ ಇವಿಎಂ ಸರಿಯಾಗಿದ್ದು, ಆ ಬಗ್ಗೆ ಎಲ್ಲರಲ್ಲೂ ಅರಿವು ಮೂಡಿಸಬೇಕು. ತಪ್ಪು ಮಾಹಿತಿ ಯಾರೂ ನೀಡಬಾರದು ಎಂದು ಹೇಳಿದರು.

ಇತ್ತೀಚೆಗೆ ರಾಜ್ಯದಲ್ಲಿ ಹೆಣ್ಣುಮಕ್ಕಳ ಮತದಾನ ಮಾಡುವ ಸಂಖ್ಯೆ ಹೆಚ್ಚಾಗಿದೆ. ಚುನಾವಣಾ ಆಯೋಗವು ಮತದಾನ ಮಾಡುವ ವಿಕಲ ಚೇತನರಿಗೆ ಹೆಚ್ಚು ಆದ್ಯತೆ ನೀಡುತ್ತಿದ್ದು, ಮತದಾನ ಮಾಡುವ ಮತಗಟ್ಟೆಗಳ ಬಳಿ ಎಲ್ಲಾ ರೀತಿಯ ಸೌಲಭ್ಯಗಳನ್ನು ಕಲ್ಪಿಸಿದೆ. ಚುನಾವಣೆಗೆ ಬೂತ್ ಮಟ್ಟದ ಅಧಿಕಾರಿಗಳ ಪಾತ್ರ ಬಹಳ ಪ್ರಮುಖವಾದ ಪಾತ್ರವಾಗಿದೆ. 18 ವರ್ಷ ತುಂಬಿದವರೆಲ್ಲರೂ ಮತದಾರರ ಪಟ್ಟಿಯಲ್ಲಿ ನೋಂದಣಿ ಮಾಡಿಕೊಂಡು ಚುನಾವಣೆ ವೇಳೆ ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾಗಿರುವ ಬಗ್ಗೆ ಖಾತರಿಪಡಿಸಿಕೊಳ್ಳಬೇಕು ಎಂದು ತಿಳಿಸಿದರು.

**ಮುಖ್ಯ ಚುನಾವಣಾಧಿಕಾರಿ ಡಾ. ಸಂಜೀವ್ ಕುಮಾರ್ ರವರು ಮಾತನಾಡಿ,** ರಾಷ್ಟ್ರದಾದ್ಯಂತ ರಾಷ್ಟ್ರ ಮತದಾರರ ದಿನಾಚರಣೆ ಆಚರಿಸಲಾಗುತ್ತಿದ್ದು, ಮತದಾರರು ಹಾಗೂ ಭಾವಿ ಮತದಾರರಿಗೆ ಮತದಾರರ ಪಟ್ಟಿಯಲ್ಲಿ ಹೆಸರು ಸೇರಿಸುವ ಹಾಗೂ ಅದರ ಮಹತ್ವದ ಬಗ್ಗೆ ಅರಿವು ಮೂಡಿಸುವ ಉದ್ದೇಶದಿಂದ ಮತದಾರರ ದಿನವನ್ನು ಆಚರಿಸಲಾಗುತ್ತಿದೆ ಎಂದು ತಿಳಿಸಿದರು.

ಪ್ರಜಾಪ್ರಭುತ್ವ ರಾಷ್ಟ್ರದಲ್ಲಿ ಮತದಾರರು ಪ್ರಮುಖ ಪಾತ್ರ ವಹಿಸಲಿದ್ದಾರೆ. ಆದ್ದರಿಂದ ಮತದಾನದ ಬಗ್ಗೆ ಮತದಾರರಿಗೆ ಸೂಕ್ತ ಮಾಹಿತಿ ನೀಡಬೇಕು. 18 ವರ್ಷ ತುಂಬಿದ ಯುವ ಮತದಾರರಿಗೆ ಮತದಾನ ಮಾಡುವ ಬಗ್ಗೆ ಹೆಚ್ಚು ಅರಿವು ಮೂಡಿಸುವ ಮೂಲಕ ಪ್ರತಿಯೊಬ್ಬರೂ ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾಗಿ ಮತದಾನದ ಹಕ್ಕನ್ನು ಚಲಾಯಿಸಬೇಕೆಂಬುದು ಚುನಾವಣಾ ಆಯೋಗದ ಗುರಿಯಾಗಿದೆ. ಅದಕ್ಕಾಗಿ ಹಲವು ಹೊಸ-ಹೊಸ ಕಾರ್ಯಕ್ರಮಗಳನ್ನು ರೂಪಿಸಿಕೊಂಡು ಎಲ್ಲರೂ ಮತದಾರರ ಪಟ್ಟಿಗೆ ಸೇರ್ಪಡೆಯಾಗಲು ಪ್ರೇರೇಪಣೆ ನೀಡಲಾಗುತ್ತಿದೆ ಎಂದರು.

ಚುನಾವಣೆ ವೇಳೆ ನೀತಿಸಂಹಿತೆ ಉಲ್ಲಂಘನೆಯನ್ನು ತಡೆಯಕು ಸಿ-ವಿಜಿಲ್ ತಂತ್ರಾಂಶ ಸಿದ್ದಪಡಿಸಲಾಗಿದ್ದು, ಯಾರಾದರು ನೀತಿಸಂಹಿತೆ ಉಲ್ಲಂಘನೆ ಮಾಡುವುದು ಕಂಡುಬಂದಲ್ಲಿ ನಾಗರಿಕರು ಛಾಯಾಚಿತ್ರ, ಧ್ವನಿ, ದೃಶ್ಯಾವಳಿ ಮೂಲಕ ಕಳುಹಿಸಬಹುದು. ಸಂಬಂಧಪಟ್ಟ ಅಧಿಕಾರಿಗಳು ಕೂಡಲೆ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ತಪ್ಪಿತಸ್ಥರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುತ್ತಾರೆ. ಕೋವಿಡ್ ವೇಳೆ ನಡೆದ ಉಪ ಚುನಾವಣೆಯಲ್ಲಿ ನಿಯಮಾನುಸಾರ ಎಲ್ಲಾ ನಿಯಮಗಳನ್ನು ಪಾಲನೆ ಮಾಡಿ ಯಶಸ್ವಿಯಾಗಿ ಚುನಾವಣೆ ನಡೆಸಲಾಗಿದೆ. ಮತದಾರರ ಸಮಸ್ಯೆಗಳನ್ನು ಆಲಿಸಲು 1950(ಓಟರ್ ಹೆಲ್ಪ್ ಲೈನ್) ಸಂಖ್ಯೆಗೆ ಶುಲ್ಕ ರಹಿತ ಕರೆ ಮಾಡಿ ಮಾಹಿತಿ ಪಡೆಯಬಹುದಾಗಿದೆ. ಅಲ್ಲದೆ ಚುನಾವಣಾ ಆಯೋಗದ ವೆಬ್‌ಸೈಟ್‌ಗೆ ಭೇಟಿ ನೀಡಿ ಅಗತ್ಯ ಮಾಹಿತಿ ಪಡೆಯಬಹುದಾಗಿದೆ ಎಂದರು.

**ಪ್ರಶಸ್ತಿ ಹಾಗೂ ಪ್ರಮಾಣ ಪತ್ರಗಳ ವಿತರಣೆ:**

**ಮಾನ್ಯ ಆಯುಕ್ತರು ರವರು 2020-21ನೇ ಸಾಲಿನ ಪ್ರಶಸ್ತಿ ಸ್ವೀಕಾರ:** ಬಿಬಿಎಂಪಿ ವ್ಯಾಪ್ತಿಯ ರಾಷ್ಟ್ರೀಯ ಮತದಾರರ ದಿನಾಚರಣೆ ಅಂಗವಾಗಿ ರಾಜ್ಯ ಮಟ್ಟದಲ್ಲಿನ 2020-21ನೇ ಸಾಲಿನ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾನ್ಯ ಆಯುಕ್ತರು ಹಾಗೂ ಜಿಲ್ಲಾ ಚುನಾವಣಾಧಿಕಾರಿ ಎನ್.ಮಂಜುನಾಥ್ ಪ್ರಸಾದ್ ರವರು ಚುನಾವಣೆ ವೇಳೆ ಉತ್ತಮವಾಗಿ ಕಾರ್ಯನಿರ್ವಹಿಸಿರುವ ಸಂಬಂಧ 2021ನೇ ಸಾಲಿನ ಪ್ರಶಸ್ತಿ ನೀಡಿ ಗೌರವಿಸಿತು.

**ಪ್ರಶಸ್ತಿ ಸ್ವೀಕರಿಸದ ಬಳಿಕ ಆಯುಕ್ತರು ಎನ್.ಮಂಜುನಾಥ್ ಪ್ರಸಾದ್ ರವರು ಮಾತನಾಡಿ,** ಬಿಬಿಎಂಪಿ ವ್ಯಾಪ್ತಿಯಲ್ಲಿ 28 ವಿಧಾನಸಭಾ ಕ್ಷೇತ್ರಗಳ ಪೈಕಿ 1.30 ಕೋಟಿ ಜನಸಂಖ್ಯೆಯಿದ್ದು, 93,75,000 ಮತದಾರಿದ್ದಾರೆ. ಮತದಾನ ಮಾಡಲು 8,500 ಮತಗಟ್ಟೆಗಳಿವೆ. ಒಂದು ಚುನಾವಣೆ ನಡೆಸಲು ಬೂತ್ ಮಟ್ಟದ ಅಧಿಕಾರಿಗಳು ವರ್ಷವಿಡೀ ಕೆಲಸ ಮಾಡುತ್ತಿರುತ್ತಾರೆ ಎಂದು ತಿಳಿಸಿದರು.

ರಾಷ್ಟ್ರೀಯ ಮತದಾರರ ದಿನವನ್ನು ಪ್ರತಿವರ್ಷವೂ ಒಂದು ದ್ಯೇಯೆಯಿಟ್ಟುಕೊಂಡು ಮಾಡಲಾಗುತ್ತದೆ. ಅದರಂತೆ ಈ ಬಾರಿ ಮತದಾರರಲ್ಲಿ ಶಕ್ತಿ ತುಂಬುವ, ಚುನಾವಣೆ ಪ್ರಕ್ರಿಯೆಲ್ಲಿ ಸತತವಾಗಿ ತೊಡಗಿಸಿಕೊಳ್ಳುವ, ಚುನಾವಣೆ ವೇಳೆ ಸುರಕ್ಷತೆಯಿಂದ ಮತದಾನ ಮಾಡುವ ಹಾಗೂ ಚುನಾವಣೆ ಬಗ್ಗೆ ಎಲ್ಲಾ ರೀತಿಯ ಮಾಹಿತಿಯನ್ನು ಮತದಾರರಿಗೆ ನೀಡುವ ವಿಷಯವಾಗಿ ಆಚರಿಸಲಾಗಿದೆ. ನಗರದಲ್ಲಿ ಯುವ ಮತದಾರರನ್ನು ಮತದಾರರ ಪಟಟಿಯಲ್ಲಿ ಸೇರ್ಪಡೆ ಮಾಡುಲು ಪಾಲಿಕೆ ಹಲವು ಕಾರ್ಯಕ್ರಮಗಳನ್ನು ರೂಪಿಸಿಕೊಂಡಿತ್ತು. ಅದರಂತೆ 65,000 ಹೊಸ ಮತದಾರರನ್ನು ಮರದಾರರ ಪಟ್ಟಿಗೆ ಸೇರ್ಪಡೆ ಮಾಡಲಾಗಿದೆ. ಸದರಿ ಪ್ರಶಸ್ತಿಯು ಪಾಲಿಕೆಯ ಚುನಾವಣಾ ಪ್ರಕ್ರಿಯೆಯಲ್ಲಿ ಕಾರ್ಯನಿರ್ವಹಿಸಿದ ಎಲ್ಲಾ ಅಧಿಕಾರಿ/ಸಿಬ್ಬಂದಿಗಳಿಗೆ ಸಲ್ಲುತ್ತದೆ ಎಂದು ಹೇಳಿದರು.

ತದನಂತರ ಚುನಾವಣಾ ಪ್ರಕ್ರಿಯೆಯಲ್ಲಿ ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿದ, ಜಿಲ್ಲಾ SVEEP ನೋಡಲ್ ಅಧಿಕಾರಿಗಳಾದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಮತದಾರರ ನೋಂದಣಾಧಿಕಾರಿಗಳಿಗೆ, ಸಹಾಯಕ ನೋಂದಣಾಧಿಕಾರಿಗಳಿಗೆ/ತಹಶಿಲ್ದಾರರುಗಳಿಗೆ ಮತ್ತು ಮತಗಟ್ಟೆ ಮಟ್ಟದ ಅಧಿಕಾರಿಗಳಿಗೆ ಪ್ರಶಸ್ತಿ ವಿತರಿಸಲಾಯಿತು. ಬಳಿಕ ರಾಜ್ಯಮಟ್ಟದ ಸ್ಪರ್ಧೆ ವಿಜೇತರು ಹಾಗೂ ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿದ ಮತದಾರರ ಸಾಕ್ಷರತಾ ಸಂಘಗಳಿಗೆ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಇದೇ ವೇಳೆ ಹೊಸ ಮತದಾರರಿಗೆ, ವಿಕಲ ಚೇತನರಿಗೆ ಹಾಗೂ ಇತರರಿಗೆ ಮತದಾರರ ಗುರುತಿನ ಚೀಟಿ ವಿತರಿಸಲಾಯಿತು.

**ಹೆಚ್ಚಿನ ಮಾಹಿತಿಗಾಗಿ ಪ್ರಶಸ್ತಿ ಪುರಸ್ಕೃತರ ಪಟ್ಟಿ ಹಾಗೂ ಭಾವಚಿತ್ರಗಳನ್ನು ಲಗತ್ತಿಸಿದೆ.**

**ಈ ವಿಷಯವನ್ನು ತಮ್ಮ ಮಾಧ್ಯಮದಲ್ಲಿ ಪ್ರಕಟಿಸಲು ಕೋರಿದೆ.**

**ಸಾರ್ವಜನಿಕ ಸಂಪರ್ಕಾಧಿಕಾರಿ**